ಕರ್ನಾಟಕ ಸರ್ಕಾರ

ಫೆಬ್ರವರಿ 9, 2017

## ಹೆಸರಾಂತ ಉದ್ಯಮಿ ಜೆ ಪಿ ನಾರಾಯಣ ಸ್ವಾಮಿ ಅವರ ನಿಧನಕ್ಕೆ ಮುಖ್ಯಮಂತ್ರಿ ಕಂಬನಿ

ಬೆಂಗಳೂರು, ಫೆಬ್ರವರಿ 9:

ಹೆಸರಾಂತ ಉದ್ಯಮಿ ಜೆ ಪಿ ನಾರಾಯಣ ಸ್ವಾಮಿ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂಬನಿ ಮಿಡಿದಿದ್ದಾರೆ.

ಕರ್ನಾಟಕ ಪ್ರದೇಶ ಆರ್ಯ ಈಡಿಗರ ಸಂಘ ಹಾಗೂ ಶ್ರೀ ಸುಧಾ ಕೋ-ಆಪರೇಟ್ ಬ್ಯಾಂಕ್ ಲಿಮಿಟೆಡ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ನಾರಾಯಣಸ್ವಾಮಿ ಅವರು ಕೊಡುಗೈ ದಾನಿ ಎಂದೇ ಹೆಸರಾಗಿದ್ದರು. ಈಡಿಗ ಜನಾಂಗದ ಸಂಘಟನೆಗೆ ವಿಶೇಷ ಒತ್ತು ನೀಡಿದ್ದ ಅವರು ಹಿಂದುಳಿದ ಸಮುದಾಯಗಳ ಎಲ್ಲಾ ಜನರೂ ಸುಶಿಕ್ಷಿತರಾದಲ್ಲಿ ಮಾತ್ರ ರಾಷ್ಟ್ರದ ಅಭಿವೃದ್ಧಿಯ ಮುಖ್ಯ ವಾಹಿನಿಯಲ್ಲಿ ಸೇರ್ಪಡೆಯಾಗಲು ಸಾಧ್ಯ ಎಂಬ ಕನಸು ಹೊತ್ತು, ಅದನ್ನು ಸಾಕಾರಗೊಳಿಸಲು ರಾಜ್ಯದ ವಿವಿಧೆಡೆಗಳಲ್ಲಿ ಶಿಕ್ಷಣ ಸಂಸ್ಥೆಗಳು ಹಾಗೂ ವಸತಿ ನಿಲಯಗಳ ಸ್ಥಾಪನೆಗೆ ಉದಾರ ದೇಣಿಗೆ ನೀಡಿದ್ದರು. ಕೇಂದ್ರ ಲೋಕ ಸೇವಾ ಆಯೋಗ, ಕರ್ನಾಟಕ ಲೋಕ ಸೇವಾ ಆಯೋಗ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಮರ್ಥವಾಗಿ ಎದುರಿಸಲು ಅನುಕೂಲವಾಗುವಂತೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಉಚಿತ ತರಬೇತಿ ನೀಡಲು ಸಂಸ್ಥೆಯನ್ನೇ ಹುಟ್ಟು ಹಾಕಿದ್ದರು. ಕೈಗಾರಿಕೆಗಳು ಹಾಗೂ ಉದ್ದಿಮೆಗಳು ತಮ್ಮ ನಿಗಮಿಕೃತ ಸಾಮಾಜಿಕ ಜವಾಬ್ದಾರಿ (ಕಾರ್ಪೋರೇಟ್ ಸೋಷಿಯಲ್ ರೆಸ್ಪಾನ್ಸಿಬಿಲಿಟಿ) ಯ ಕುರಿತು ಆಲೋಚಿಸುವ ಮುನ್ನವೇ ಅದನ್ನು ಅನುಷ್ಠಾನಕ್ಕೆ ತಂದ ಮೇರು ವ್ಯಕ್ತಿ ಜೆ ಪಿ ನಾರಾಯಣಸ್ವಾಮಿ ಅವರಾಗಿದ್ದರು ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಜೆ ಪಿ ನಾರಾಯಣಸ್ವಾಮಿ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಅವರ ಅಗಲಿಕೆಯಿಂದ ಉಂಟಾದ ನೋವನ್ನು ಭರಿಸುವ ಶಕ್ತಿಯನ್ನು ಅವರ ಬಂಧು-ಮಿತ್ರರಿಗೆ ಕರುಣಿಸಲಿ ಎಂದು ಮುಖ್ಯಮಂತ್ರಿ ಪರಮಾತ್ಮನಲ್ಲಿ ಪ್ರಾರ್ಥಿಸಿದ್ದಾರೆ.

*********

ಡಿ ಪಿ ಎಂ